**2 ನೇ ಆಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬಳ್ಳಾರಿ**

**ಸತ್ರ ಮೊಕದ್ದಮೆ ಸಂಖ್ಯೆ: 47/2024**

ಪಿ.ಡಬ್ಲುಃ 3 ಸಿಡಬ್ಲುಃ 5

| | | |
|---|---|---|
| ಸಾಕ್ಷಿಯ ಹೆಸರು | : | ಮಡಿವಾಳ ಸೋಮ |
| ತಂದೆಯ ಹೆಸರು | : | ಸಿದ್ದಪ್ಪ |
| ವಯಸ್ಸು | : | 35 ವರ್ಷ |
| ವೃತ್ತಿ | : | ವ್ಯವಸಾಯ |
| ವಾಸಸ್ಥಳ | : | ಎತ್ತಿನ ಬೂದಿಹಾಳ್ |

**ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ 03.12.2025**

**ಮುಖ್ಯ ವಿಚಾರಣೆ ಮಾನ್ಯ ಸಾರ್ವಜನಿಕ ಅಭಿಯೋಜಕರಿಂದಃ-**

1) ನನಗೆ ಚಾಸಾ-1 ಇವರ ಪರಿಚಯವಿಲ್ಲ. ನನಗೆ ಚಾಸಾ-6 ಇವರ ಪರಿಚಯವಿದೆ. ಈಗ ನೋಡುತ್ತಿರುವ ನೊಟೀಸಿಗೆ ಹಾಗು ನಿಪಿ-3 ಪಂಚನಾಮೆಗೆ ನಾನು ಸಹಿ ಮಾಡಿದ್ದೇನೆ. ನೊಟೀಸನ್ನು ನಿಪಿ-11 ಅದರಲ್ಲಿಯ ಸಾಕ್ಷಿಯ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು. ನಿಪಿ-3 ಪಂಚನಾಮೆಯಲ್ಲಿಯ ಸಾಕ್ಷಿಯ ಸಹಿಯನ್ನು ನಿಪಿ-3 (ಬಿ) ಎಂದು ಗುರುತಿಸಲಾಯಿತು.

2) ನಾನು ಚಾಸಾ-1 ಇವರ ಮನೆಯ ಹತ್ತಿರ ಒಂದುವರೆ ವರ್ಷದ ಹಿಂದೆ ಹೋಗುತ್ತಿರುವಾಗ ಪೊಲೀಸರು ನನ್ನ ಸಹಿ ಪಡೆದಿರುತ್ತಾರೆ. ಅದರಲ್ಲಿ ಏನು ಬರೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊ1 ಯಾವುದೇ ಪಂಚನಾಮೆಯನ್ನು ಮಾಡಿಲ್ಲ ಹಾಗು ಯಾವುದೇ ವಸ್ತುಗಳನ್ನು ಜಪ್ತು ಪಡಿಸಿಕೊಂಡಿಲ್ಲ. ಈಗ ನೋಡುತ್ತಿರುವ ನಿಪಿ-5 ಹಾಗು 6 ಭಾವಚಿತ್ರಗಳಲ್ಲಿ ನಾನು ಇರುತ್ತೇನೆ ಅವುಗಳನ್ನು ಯಾವ ಉದ್ದೇಶಕ್ಕಾಗಿ ತೆಗೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ಸದರಿ ಭಾವಚಿತ್ರಗಳನ್ನು ಸಹಿ ಪಡೆದುಕೊಳ್ಳುವಾಗ ತೆಗೆದುಕೊಂಡಿರುತ್ತಾರೆ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀಸವಾಲು ಮಾಡಲು ಸರ್ಕಾರಿ ಅಭಿಯೋಜಕರು ಅನುಮತಿ ಕೋರಿರುತ್ತಾರೆ. ಅವರ ವಾದವನ್ನು ಕೇಳಿ, ಸಾಕ್ಷಿಯ ಹೇಳಿಕೆಯನ್ನು ಹಾಗೂ ಮುಖ್ಯ ವಿಚಾರಣೆಯನ್ನು ಪರಿಶೀಲನೆ ಮಾಡಿ, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಸರ್ಕಾರಿ ಅಭಿಯೋಜಕರಿಗೆ ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು).

ಪಾಟೀಸವಾಲು ಮಾನ್ಯ ಸಾರ್ವಜನಿಕ ಅಭಿಯೋಜಕರಿಂದಃ-

3) ಪೊಲೀಸರು ಚಾಸಾ-1 ಇವರ ಮಗಳು ಪಾರ್ವತಿ ಆತ್ಮಹತ್ಯೆ ಮಾಡಿಕೊಂಡಿರುವ ಕುರಿತು ಸ್ಥಳ ಪಂಚನಾಮೆ ಮಾಡಲು ನೊಟೀಸನ್ನು ನೀಡಿದ್ದರು ಎಂದರೆ ಸರಿಯಲ್ಲ. ಆ ದಿವಸ ಚಾಸಾ-6 ಕೂಡ ನನ್ನ ಜೊತೆ ಪಂಚನಾಮೆ ಮಾಡಲು ನೊಟೀಸು ಪಡೆದುಕೂಂಡಿದ್ದು ಅವರು ಕೂಡ ಹಾಜರಿದ್ದರು ಎಂದರೆ ಸರಿಯಲ್ಲ. ದಿನಾಂಕ 29.02.2024 ರಂದು ಮಧ್ಯಾಹ್ನ 01 ರಿಂದ 02 ಗಂಟೆಯವರೆಗೆ ನನ್ನ ಹಾಗು ಚಾಸಾ-6 ಇವರ ಸಮಕ್ಷಮದಲ್ಲಿ ಚಾಸಾ-1 ಇವರು ತೋರಿಸಿದ ಅವರ ಮನೆಯಲ್ಲಿ ನಿಪಿ-3 ರಂತೆ ಪಂಚನಾಮೆಯನ್ನು ಮಾಡಿ ಅದರಲ್ಲಿ ಬರೆದ ವಿಷಯಗಳನ್ನು ಓದಿ ಹೇಳಿ ನಮ್ಮ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

4) ಪಂಚನಾಮೆ ಮಾಡುವ ಕಾಲಕ್ಕೆ ಚಾಸಾ-1 ಇವರು ನೀಡಿದ ಈಗ ನೋಡುತ್ತಿರುವ ಮುಮಾ1 ರಿಂದ 3 ಇವುಗಳನ್ನು ಜಪ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಪಂಚನಾಮೆ ಮಾಡುವ ಕಾಲಕ್ಕೆ ನಿಪಿ-5 ಹಾಗು 6 ಭಾವಚಿತ್ರಗಳನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಚಾಸಾ-1 ಇವರ ಮಗಳು ಆತ್ಮಹತ್ಯೆ ಮಾಡಿಕೊಂಡಿರುವ ಕುರಿತು ಸ್ಥಳ ಪಂಚನಾಮೆಯನ್ನು ಪೊಲೀಸರು ನಮ್ಮ ಸಮಕ್ಷಮ ಮಾಡಿದರೂ ಕೂಡ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

SC No.47/2024
PW- 3

<u>ಪಾಟೀಸವಾಲು ಆರೋಪಿತರ ಪರವಾಗಿ ಶ್ರೀ ಬಿ.ವಿ.ಬಿ ವಕೀಲರಿಂದಃ</u>

ಶ್ರೀ ಬಿ.ವಿ.ಬಿ ಹಾಗು ಶ್ರೀ ಎಮ್.ಎ.ಬಿ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

ಮರುವಿಚಾರಣೆ ಇಲ್ಲ.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ. ಸರಿ ಇದೆ.

**C/c, 2** ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬಳ್ಳಾರಿ.